ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಇ-ಆಡಳಿತ/ಎಸ್‌ಎಸ್‌ಪಿ/2019-20

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ
18ನೇಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 18/03/2020

**ಸುತ್ತೋಲೆ**

**ವಿಷಯ:** ಸಿಐಎಸ್ ಪೋರ್ಟಲ್‌ನಲ್ಲಿ ಪದವಿ ಪೂರ್ವ ಕಾಲೇಜುಗಳ ಬ್ಯಾಂಕ್ ವಿವರಗಳನ್ನು ನೋಂದಾಯಿಸುವ ಬಗ್ಗೆ.

**ಉಲ್ಲೇಖ:** ಮಾನ್ಯ ಸರ್ಕಾರದ ಅಪರ ಪ್ರಧಾನ ಕಾರ್ಯದರ್ಶಿಗಳು ಇವರ ಅಧಿನದಲ್ಲಿ ನಡೆದ ಸಭೆ ದಿನಾಂಕ: 18/03/2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿ ವೇತನವನ್ನು ಆನ್‌ಲೈನ್ ಮೂಲಕ ವಿತರಿಸಲಾಗುತ್ತಿದ್ದು, ಉಲ್ಲೇಖಿತ ಸಭೆಯಲ್ಲಿ ಮಾನ್ಯ ಅಪರ ಪ್ರಧಾನ ಕಾರ್ಯದರ್ಶಿಗಳು ಪದವಿ ಪೂರ್ವ ಕಾಲೇಜುಗಳ ಬ್ಯಾಂಕ್ ಖಾತೆಗಳ ಮಾಹಿತಿಯನ್ನು ಸಿಐಎಸ್ ಪೋರ್ಟಲ್‌ನಲ್ಲಿ ಜಿಲ್ಲಾ ಉನಿರ್ದೇಶಕರ ಲಾಗಿನ್ ಮೂಲಕ ಅಪ್‌ಡೇಟ್ ಮಾಡಲು ಸೂಚಿಸಿರುತ್ತಾರೆ.

ಈ ಸಂಬಂಧ ಸಿಐಎಸ್ ಪೋರ್ಟಲ್‌ನ ಲಾಗಿನ್ ಐಡಿ ಪಾಸ್‌ವರ್ಡ್‌ಗಳನ್ನು ಈಗಾಗಲೇ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ನೀಡಲಾಗಿದ್ದು, ಸದರಿ ಪೋರ್ಟ್‌ನ **"Update Bank Account Details"** ನಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳ ಬ್ಯಾಂಕ್ ವಿವರಗಳನ್ನು ಜಿಲ್ಲಾ ಉಪನಿರ್ದೇಶಕರು ದಿನಾಂಕ: 20-03-2020 ರೊಳಗಾಗಿ ಅಪ್‌ಡೇಟ್ ಮಾಡಿಸಲು ಸೂಚಿಸಿದೆ. ಒಂದುವೇಳೆ ತಪ್ಪಿದಲ್ಲಿ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರನ್ನೇ ನೇರಹೊಣೆಗಾರರನ್ನಾಗಿ ಮಾಡಲಾಗುವುದು. ಈ ಸುತ್ತೋಲೆಯನ್ನು ಅತೀ ತುರ್ತು ಹಾಗೂ ಪ್ರಮುಖ ಎಂದು ಭಾವಿಸತಕ್ಕದ್ದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ,

1. ಮಾನ್ಯ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಡಿಪಿಎಆರ್, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ರಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ (ಎಲ್ಲಾ ಕಾಲೇಜುಗಳಿಂದ ಮಾಹಿತಿ ಪಡೆದು ಸಿಐಎಸ್ ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡಿಸುವುದು
3. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ (ಜಿಲ್ಲಾ ಉಪನಿರ್ದೇಶಕರಿಗೆ ಮಾಹಿತಿ ಸಲ್ಲಿಸಿ ಸಿಐಎಸ್ ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡಿಸುವುದು)
4. ಕಛೇರಿ ಪ್ರತಿ.